**Tuesday 03rd October 2023, Page No.04**

**RV Engineering College First Year BE classes Inauguration Ceremony 2023-2024**

ಕನ್ನಡಪ್ರಭ

# ‘ಎನ್‌ಇಪಿಯಿಂದ ಉತ್ತಮ ಶಿಕ್ಷಣ’

## ತಂತ್ರಜ್ಞಾನ ಕ್ಷೇತ್ರದಲ್ಲಿ ಗಣನೀಯ ಸಾಧನೆ: ತಾಂತ್ರಿಕ ಶಿಕ್ಷಣ ಮಂಡಳಿ ಅಧ್ಯಕ್ಷ ಸೀತಾರಾಂ

• **ಕನ್ನಡಪ್ರಭ ವಾರ್ತೆ** ಕೆಂಗೇರಿ

ನೂತನ ರಾಷ್ಟ್ರೀಯ ಶಿಕ್ಷಣ ನೀತಿ ಜಾರಿಯಿಂದ ಶೈಕ್ಷಣಿಕ ಕ್ಷೇತ್ರದಲ್ಲಿ ಅಮೂಲಾಗ್ರ ಬದಲಾವಣೆ ಆಗಲಿದೆ. ಮುಂಬರುವ ದಿನಗಳಲ್ಲಿ ಭಾರತ ತಂತ್ರಜ್ಞಾನ ಕ್ಷೇತ್ರದಲ್ಲಿ ಗಣನೀಯ ಸಾಧನೆ ಮಾಡಲಿದೆ ಎಂದು ನವದೆಹಲಿಯ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ ಅಧ್ಯಕ್ಷ ಪ್ರೊ.ಟಿ.ಜಿ.ಸೀತಾರಾಮ್ ಅಭಿಪ್ರಾಯಪಟ್ಟರು.

ಬೆಂಗಳೂರು-ಮೈಸೂರು ಮುಖ್ಯ ರಸ್ತೆಯಲ್ಲಿರುವ ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ ಪೂರ್ಣಿಮಾ ಪ್ಯಾಲೇಸ್‌ನಲ್ಲಿ ಆಯೋಜಿಸಲಾಗಿದ್ದ 2023-24ನೇ ಸಾಲಿನ ಪ್ರಥಮ ಬಿಇ ತರಗತಿಗಳ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.



**ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದಿಂದ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಈ ವೇಳೆ ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿಯ ಅಧ್ಯಕ್ಷ ಪ್ರೊ.ಟಿ.ಜಿ.ಸೀತಾರಾಮ್, ಪ್ರಾಂಶುಪಾಲ ಡಾ। ಕೆ.ಎನ್.ಸುಬ್ರಹ್ಮಣ್ಯ ಉಪಸ್ಥಿತರಿದ್ದರು.**

ಎನ್‌ಇಪಿಯಿಂದ ಎಂಜಿನಿಯರಿಂಗ್ ಮತ್ತು ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಪ್ರಾದೇಶಿಕ ಭಾಷೆಯಲ್ಲಿ ತಾಂತ್ರಿಕ ಪಠ್ಯಕ್ರಮ ಸಿಗುತ್ತವೆ. ಇದರಿಂದ ಸುಲಭ ಮತ್ತು ಸರಳವಾಗಿ ಪಠ್ಯಕ್ರಮಗಳನ್ನು ಅರ್ಥೈಸಿಕೊಂಡು ಜ್ಞಾನ ಹೆಚ್ಚಿಸಿಕೊಳ್ಳಲು ಸಹಕಾರಿಯಾಗುತ್ತದೆ. ತಂತ್ರಜ್ಞಾನ ಕ್ಷೇತ್ರದಲ್ಲಿ ವಿಶ್ವದ ಇತರ ರಾಷ್ಟ್ರಗಳೊಂದಿಗೆ ಪ್ರತಿಸ್ಪರ್ಧೆಯೊಡ್ಡಿ ಎದುರಾಗುವ ಸವಾಲುಗಳನ್ನು ಸಮರ್ಥವಾಗಿ ನಿಭಾಯಿಸಲು ಕೇಂದ್ರ ಸರ್ಕಾರ ಗುಣಮಟ್ಟದ ಶಿಕ್ಷಣದೊಂದಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡುತ್ತಿದೆ. ಈ ಮೂಲಕ ದೇಶದ ಅಭಿವೃದ್ಧಿಯಲ್ಲಿ ವಿದ್ಯಾರ್ಥಿಗಳು ಪಾಲ್ಗೊಳ್ಳಬಹುದು ಎಂದರು.

ಆರ್‌ವಿ ತಾಂತ್ರಿಕ ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷ ಡಾ। ಎಂ.ಪಿ.ಶ್ಯಾಮ್ ಮಾತನಾಡಿದರು. ಇದೇ ಸಂದರ್ಭದಲ್ಲಿ ಕಾಲೇಜಿನಲ್ಲಿ ವ್ಯಾಸಂಗ ನಡೆಸಿ ಉನ್ನತ ಹುದ್ದೆ ಅಲಂಕರಿಸಿರುವ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಫಲಕ ನೀಡಿ ಗೌರವಿಸಲಾಯಿತು. ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್ ಗೌರವ ಕಾರ್ಯದರ್ಶಿ ಡಾ। ಎ.ವಿ.ಎಸ್.ಮೂರ್ತಿ, ಪ್ರಾಂಶುಪಾಲ ಡಾ। ಕೆ.ಎನ್.ಸುಬ್ರಹ್ಮಣ್ಯ, ಉಪ ಪ್ರಾಂಶುಪಾಲೆ ಡಾ। ಗೀತಾ ಸುಬ್ರಹ್ಮಣ್ಯ ಉಪಸ್ಥಿತರಿದ್ದರು.